# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1086 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.12.2021. |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಮೈಸೂರಿನಿಂದ ಬಾವಲಿ ಮಾರ್ಗವಾಗಿ ಕೇರಳದ ಮಾನಂದವಾಡಿ ವರೆಗಿನ ಅಂತರರಾಜ್ಯ ಹೆದ್ದಾರಿಯಲ್ಲಿ ವಾಹನ ದಟ್ಟಣೆ ತುಂಬಾ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೈಸೂರಿನಿಂದ ಬಾವಲಿ ಮಾರ್ಗವಾಗಿ ಕೇರಳದ ಮಾನಂದವಾಡಿ ವರೆಗಿನ ಅಂತರರಾಜ್ಯ ಹೆದ್ದಾರಿ ರಸ್ತೆಯು ರಾಜ್ಯಹೆದ್ದಾರಿ–33 ಆಗಿದ್ದು, 2020–21ನೇ ಸಾಲಿನ ಸಂಚಾರ ಗಣತಿಯನ್ವಯ 17035 PCU ಹಾಗೂ 4986 CPVD ಯುನಿಟ್‌ಗಳಷ್ಟು ವಾಣಿಜ್ಯ ವಾಹನಗಳ ದಟ್ಟಣೆ ಹೆಚ್ಚಾಗಿರುತ್ತದೆ. |
| ಆ. | ಇದರಿಂದಾಗಿ ಅಪಘಾತಗಳು ಮತ್ತು ಪ್ರಯಾಣದ ಸಮಯ ತುಂಬಾ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ. | ಅಂತರ ರಾಜ್ಯ ಸಂಪರ್ಕ ಕಲ್ಪಿಸುವ ಸದರಿ ರಸ್ತೆಯನ್ನು ಸಾರ್ವಜನಿಕರ ಸುರಕ್ಷತಾ ಮತ್ತು ಪ್ರಮಾಣದ ಸಮಯ ಕಡಿಮೆ ಮಾಡುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ಕೇಂದ್ರ ಸರ್ಕಾರಕ್ಕೆ ಇದುವರೆವಿಗೆ ಶಿಫಾರಸ್ಸು ಮಾಡದೆ ಇರಲು ಕಾರಣವೇನು; | ರಾಜ್ಯ ಹೆದ್ದಾರಿ–33 ಭಾರತ ಸರ್ಕಾರದ ಕೇಂದ್ರ ಭೂಸಾರಿಗೆ ಹಾಗೂ ಹೆದ್ದಾರಿ ಮಂತ್ರಾಲಯದ ಪತ್ರದ ಸಂಖ್ಯೆ: ಓಊ–14012–8–2013–ಹ.ಒ, ದಿನಾಂಕ:29.01.2016 ರಂತೆ ತಾತ್ವಿಕವಾಗಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಘೋಷಣೆ ಮಾಡಲಾಗಿರುತ್ತದೆ ಹಾಗೂ ಸದರಿ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಅಭಿವೃದ್ಧಿಪಡಿಸುವ ಸಲುವಾಗಿ ಕಾರ್ಯಸಾಧ್ಯತಾ ಸಮೀಕ್ಷೆ ಹಾಗೂ ವಿವರವಾದ ಯೋಜನಾ ವರದಿಯನ್ನು (FS & DPR) ತಯಾರಿಸುವ ಸಲುವಾಗಿ ಟೆಂಡರ್ ಆಹ್ವಾನಿಸಲಾಗಿದ್ದು, ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ ಯಶಸ್ವಿ ಬಿಡ್ಡುದಾರರಾದ M/s. Shrikhande Consultants Pvt.Ltd JV with M/s. C.V.Kand Consultants Pvt.Ltd., Mumbai, ಇವರಿಗೆ ಕೇಂದ್ರ ಭೂಸಾರಿಗೆ ಹಾಗೂ ಹೆದ್ದಾರಿ ಮಂತ್ರಾಲಯದ ಪತ್ರದ ಸಂಖ್ಯೆ:NH-12014/3/2017/KNT-(P-6), ದಿನಾಂಕ: 28.07.2017ರಲ್ಲಿ ಅನುಮೋದನೆಗೊಂಡಿದ್ದು, ದಿನಾಂಕ: 01.02.2018ರಲ್ಲಿ ಕಾರ್ಯಾದೇಶ ನೀಡಲಾಗಿರುತ್ತದೆ. ಕರಾರಿನ್ವಯ Final alignment Report ಅನ್ನು ದಿನಾಂಕ: 24.04.2019ರಲ್ಲಿ ಕೇಂದ್ರ ಭೂಸಾರಿಗೆ ಮಂತ್ರಾಲಯಕ್ಕೆ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br><br>ಆದರೆ ಕೇಂದ್ರ ಸರ್ಕಾರದ ನೀತಿಯಂತೆ ಕೇಂದ್ರ ಭೂಸಾರಿಗೆ ಹಾಗೂ ಹೆದ್ದಾರಿ ಮಂತ್ರಾಲಯದ ಪತ್ರ ಸಂಖ್ಯೆ: RW/NH-33044/24/2020/S&R(P&B), ದಿನಾಂಕ: 28.07.2020 ರಲ್ಲಿ ತಾತ್ವಿಕವಾಗಿ ಅನುಮೋದಿತವಾಗಿರುವ ಪ್ರಸ್ತಾವನೆಗಳನ್ನು ಇದ್ದ ಸ್ಥಿತಿಯಲ್ಲಿಯೇ ಅವಧಿಪೂರ್ವ ಮುಕ್ತಾಯಗೊಳಿಸಲು ಸೂಚಿಸಲಾಗಿದೆ. ಅದರಂತೆ ಕ್ರಮ ಕೈಗೊಳ್ಳಲಾಗಿರುತ್ತದೆ. |
| ಈ. | ಯಾವ ಕಾಲಮಿತಿಯಲ್ಲಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಲಾಗುವುದು? | |

ಕಡತ ಸಂಖ್ಯೆ: ಲೋಇ 347 ಸಿಎನ್‌ಹೆಚ್ 2021 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು